**ಸಿ.ಡಬ್ಲೂ–10 / ಪಿ.ಡಬ್ಲೂ–8**

**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ .**

**ಸಿ.ಸಿ.ನಂ. 36/2017**

| | | |
|---|---|---|
| ಸಾಕ್ಷಿದಾರರ ಹೆಸರು | : | ಮಹೇಶ |
| ತಂದೆಯ ಹೆಸರು | : | ಶಿವಣ್ಣ |
| ವಯಸ್ಸು | : | 32 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಚಿಲಕಹಳ್ಳಿ ಗ್ರಾಮ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕಃ 14.05.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ಆರೋಪಿಗಳು ನನಗೆ ಪರಿಚಯವಿರುತ್ತಾರೆ. ಈಗ ನನಗೆ ತೋರಿಸುತ್ತಿರುವ ನಿ.ಪಿ-2 ರಲ್ಲಿ ನನ್ನ ಸಹಿ ಇದ್ದು, ಸದರಿ ಸಹಿಯನ್ನು ನಮ್ಮ ಜಮೀನಿನಿಂದ ಊರಿಗೆ ಬರುವಾಗ ಪೊಲೀಸರು ಸಹಿ ಬೇಕೆಂದು ಕೇಳಿದ್ದರಿಂದ ಸಹಿ ಹಾಕಿರುತ್ತೇನೆ. ಸಾಕ್ಷಿಯು ನಿ.ಪಿ-2 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು ನಿ.ಪಿ-2(ಸಿ) ಎಂದು ಗುರುತಿಸಲಾಯಿತು. ನಿ.ಪಿ-2 ರಲ್ಲಿ ಏನೆಲ್ಲಾ ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಮತ್ತು ಏನನ್ನು ವಶಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅ ರವರಿಂದಃ**

ಆರೋಪಿಗಳು ಚಾಸಾ-2 ಮತ್ತು 3 ರವರ ಜೊತೆ ಗಲಾಟೆ ಮಾಡಿ ಕ್ರಿಕೇಟ್ ಬ್ಯಾಟ್ ನಿಂದ ಹಲ್ಲೆ ಮಾಡಿರುವ ವಿಚಾರವಾಗಿ ದಿನಾಂಕ 26.06.2016 ರಂದು ಪೊಲೀಸರು ನಮ್ಮ ಊರಿನಲ್ಲಿರುವ ಹಾಲದಮ್ಮನ ದೇವಸ್ಥಾನದ ಆವರಣದಲ್ಲಿ ನಿಪಿ-2 ರಂತೆ ಮಹಜರ್ ಮಾಡಿ, ಒಂದು ಬ್ಯಾಟ್ ನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಮಹಜರ್ ವಿಷಯಗಳನ್ನೇ ತಿಳಿದುಕೊಂಡೇ ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿಗಳ ಪರ ವಕೀಲರಿಂದಃ ಏನೂ ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/–

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**
**ನಂಜನಗೂಡು.**